# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಅಯ್ಯಪ್ಪ ಎಸ್.ಮಲಗಲದಿನ್ನಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಆಲೂರ ಗ್ರಾಮ ಪಂಚಾಯಿತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ಶಿಫಾರಸ್ಸಿನನ್ವಯ ಕ್ರಮವಹಿಸುವ ಬಗ್ಗೆ.

**ಓದಲಾಗಿದೆ:**

1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 659 ಗ್ರಾಪಂಕಾ 2016, ದಿನಾಂಕ: 02.11.2016.
2) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. ಉಪಲೋಕ್-1/ಡಿಇ/620/2016/ಎಆರ್ಇ-10, ದಿನಾಂಕ: 01.03.2018.
3) ಸರ್ಕಾರದ ಸಮಸಂಖ್ಯೆಯ ಎರಡನೇ ಕಾರಣ ಕೇಳಿ ನೋಟೀಸ್, ದಿನಾಂಕ 19.03.2018.
4) ಶ್ರೀ ಅಯ್ಯಪ್ಪ ಎಸ್.ಮಲಗಲದಿನ್ನಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಆಲೂರ ಗ್ರಾಮ ಪಂಚಾಯಿತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರು ಎರಡನೇ ಕಾರಣ ಕೇಳಿ ನೋಟೀಸ್‌ಗೆ ಸಲ್ಲಿಸಿರುವ ಉತ್ತರ, ದಿನಾಂಕ 09.04.2018.

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ, ಶ್ರೀ ಅಯ್ಯಪ್ಪ ಎಸ್.ಮಲಗಲದಿನ್ನಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಆಲೂರ ಗ್ರಾಮ ಪಂಚಾಯಿತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ವಿರುದ್ಧ ಕೆಳಕಂಡ ಆರೋಪದ ಮೇಲೆ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

> "ಶ್ರೀ ಅಯ್ಯಪ್ಪ ಎಸ್.ಮಲಗಲದಿನ್ನಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಆಲೂರ ಗ್ರಾಮ ಪಂಚಾಯಿತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ, ಆಪಾದಿತ ಸರ್ಕಾರಿ ನೌಕರರಾದ ನೀವು ಆಲೂರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಆಸ್ತಿ ಸಂ.191 ರ ಖಾತೆಯನ್ನು ದೂರುದಾರರ ಸಹೋದರನಾದ ಶ್ರೀ ಬಸವನಗೌಡ ದೊಡ್ಡಬಸಪ್ಪಗೌಡ ಹಿರೇಗೌಡ್ರ ಇವರ ಹೆಸರಿಗೆ ನೊಂದಾಯಿಸಿರುತ್ತೀರಿ. ಇದಕ್ಕೆ ದೂರುದಾರರು ತಕರಾರು ಮಾಡಿದ್ದರೂ ಸಹ ಅದನ್ನು ಪರಿಗಣಿಸಿರುವುದಿಲ್ಲ. ಈ ಖಾತೆ ಬದಲಾವಣೆಗೆ ಪಂಚಾಯಿತಿಯ ಠರಾವನ್ನು ಸಹ ಮಾಡಲಾಗಿರುತ್ತದೆ. ಈ ಖಾತೆ ಬದಲಾವಣೆ ಮಾಡಬಾರದೆಂದು ದೂರುದಾರರು ತಕರಾರನ್ನು ಗ್ರಾಮ ಪಂಚಾಯಿತಿಗೆ ನೀಡಿದ್ದರೂ ಸಹ ಅದನ್ನು ಪರಿಗಣಿಸದೆ ಹಕ್ಕು ಬಿಡುಗಡೆ ಪತ್ರದ ಪ್ರಕಾರ ದಾಖಲು ಮಾಡಲು ಪಂಚಾಯಿತಿಯಲ್ಲಿ ಠರಾವನ್ನು ಪಾಸ್ ಮಾಡಿರುತ್ತೀರಿ. ಆಪಾದಿತ ಸರ್ಕಾರಿ ನೌಕರರಾದ ನೀವು ಠರಾವು ಪಾಸ್ ಮಾಡಿದ ಕಾಲದಲ್ಲಿ ದೂರುದಾರರ ತಕರಾರು ಇದ್ದ ಬಗ್ಗೆ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಯವರ ಗಮನಕ್ಕೆ ತಂದಿರುವುದಿಲ್ಲ.
>
> ಆದ ಕಾರಣ ಆಪಾದಿತ ಸರ್ಕಾರಿ ನೌಕರರಾದ ನೀವು ಸರ್ಕಾರಿ ಸೇವಕರಾಗಿದ್ದು, ನಿಮ್ಮ ಕರ್ತವ್ಯ ಪಾಲನೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆಯನ್ನು ತೋರಿಸದೆ ಸ್ವಂತ ಲಾಭಕ್ಕಾಗಿ ಸಾರ್ವಜನಿಕ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿದ್ದು, ಆಪಾದಿತ ಸರ್ಕಾರಿ ನೌಕರರಾದ ನೀವು ಕರ್ನಾಟಕ ಸರ್ಕಾರಿ ಸೇವಾ (ನಡತೆ) ನಿಯಮಾವಳಿ 1966ರ ನಿಯಮ 3(1)ನೇ ನಿಬಂಧನೆಯನ್ನು ಉಲ್ಲಂಘಿಸಿ ದುರ್ನಡತೆ ಎಸಗಿದ್ದೀರಿ"

ಮೇಲೆ ಓದಲಾದ (2) ರಲ್ಲಿ, ತನಿಖಾಧಿಕಾರಿಗಳಾದ ಅಪರ ನಿಬಂಧಕರು, ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ ಇವರು ಪ್ರಕರಣದ ಬಗ್ಗೆ ವಿಚಾರಣೆ ನಡೆಸಿ ವರದಿ ಸಲ್ಲಿಸಿದ್ದು, ಆರೋಪಗಳು ಸಾಬೀತಾಗಿರುವ ಹಿನ್ನೆಲೆಯಲ್ಲಿ ಮಾನ್ಯ ಉಪಲೋಕಾಯುಕ್ತರು ದಿನಾಂಕ: 26.02.2018 ರ ವರದಿಯಲ್ಲಿ ಶ್ರೀ ಅಯ್ಯಪ್ಪ ಎಸ್.ಮಲಗಲದಿನ್ನಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಆಲೂರ ಗ್ರಾಮ ಪಂಚಾಯಿತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರ ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆಹಿಡಿಯುವ ದಂಡನೆಯನ್ನು ವಿಧಿಸಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ (3) ರಲ್ಲಿ ಪ್ರಕರಣದ ಸಂಬಂಧ ಮಾನ್ಯ ಉಪಲೋಕಾಯುಕ್ತರು ದಂಡನೆ ವಿಧಿಸಲು ಶಿಫಾರಸ್ಸು ಮಾಡಿರುವ ಹಿನ್ನೆಲೆಯಲ್ಲಿ ಆಕ್ಷೇಪಣೆಗಳನ್ನು ಆಹ್ವಾನಿಸಿ ಸದರಿ ನೌಕರರಿಗೆ ಎರಡನೇ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿತ್ತು.

.....2

ಮೇಲೆ ಓದಲಾದ (4) ರಲ್ಲಿ ಆರೋಪಿತ ನೌಕರರು ಎರಡನೇ ಕಾರಣ ಕೇಳುವ ನೋಟೀಸಿಗೆ ಕೆಳಗಿನಂತೆ ಆಕ್ಷೇಪಣೆಗಳನ್ನು ಸಲ್ಲಿಸಿರುತ್ತಾರೆ.

- ಆಸ್ತಿ ಸಂ.191 ರ ಖಾತೆಯನ್ನು ದೂರುದಾರರಾದ ಶ್ರೀ ವೀರೇಶಗೌಡ ಡಿ ಹಿರೇಗೌಡರ ಬಿನ್ ದೊಡ್ಡಬಸಪ್ಪಗೌಡ ರವರ ಸಹೋದರನಾದ ಶ್ರೀ ಬಸನಗೌಡ ದೊಡ್ಡಬಸಪ್ಪಗೌಡ ಹಿರೇಗೌಡರ ಇವರ ಹೆಸರಿಗೆ ನೋಂದಾಯಿಸುವುದಕ್ಕೆ ತಕರಾರು ಮಾಡಿದ್ದನ್ನು ಮತ್ತು ಹಕ್ಕು ಬಿಟ್ಟ ಪತ್ರದ ಪ್ರಕಾರ ಹೆಸರನ್ನು ದಾಖಲು ಮಾಡುವ ಬಗ್ಗೆ ಆಲೂರ ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆ ದಿನಾಂಕ: 06-06-2014 ರ ಠರಾವು ನಂ.6/2ರ ವಿಷಯದಲ್ಲಿ ಗಮನಕ್ಕೆ ತಂದರೂ ಸಹ ಅದನ್ನು ಗಮನಿಸದೇ ಹಕ್ಕು ಬಿಟ್ಟ ಪತ್ರದ ಪ್ರಕಾರ ಹೆಸರು ದಾಖಲು ಮಾಡಲು ಠರಾವು ಮಾಡಿರುತ್ತದೆ.
- ಈ ವಿಷಯದಲ್ಲಿ ದೂರುದಾರರ ತಕರಾರನ್ನು ನಾನು ಪರಿಗಣಿಸಿಯೇ ಸಭೆಯ ಗಮನಕ್ಕೆ ತಂದಿರುತ್ತೇನೆ. ಆದರೆ ಸಭೆಯು ಪರಿಗಣಿಸದೆ ಇರುವುದಕ್ಕೆ ನಾನು ಹೊಣೆಗಾರನಾಗಿರುವುದಿಲ್ಲ. ಅಲ್ಲದೇ ದೂರುದಾರರ ತಕರಾರು ಇದ್ದ ಬಗ್ಗೆ ಕಾರ್ಯನಿರ್ವಾಹಕ ಅಧಿಕಾರಿಗಳ ಗಮನಕ್ಕೆ ತರುವ ಪೂರ್ವದಲ್ಲಿ ಗ್ರಾಮ ಪಂಚಾಯತಿ ಸಭೆಯ ಗಮನಕ್ಕೆ ತಂದು ತಕರಾರು ಇದ್ದ ಪ್ರಯುಕ್ತ ಖಾತೆ ಬದಲಾವಣೆ ಮಾಡಲು ಬರುವುದಿಲ್ಲವೆಂದು ಸ್ಪಷ್ಟವಾಗಿ ತಿಳಿಸಲಾಗಿರುತ್ತದೆ. ಅಲ್ಲದೇ ಇದರಲ್ಲಿ ನನ್ನದು ಯಾವುದೇ ಸ್ವಯಂ ಉದ್ದೇಶ ಹೊಂದಿರುವುದಿಲ್ಲ. ಸಭೆಯ ತಕರಾರನ್ನು ಪರಿಗಣಿಸದೆ ಹಕ್ಕು ಪತ್ರದ ಪ್ರಕಾರ ಖಾತೆ ಬದಲಾವಣೆ ಮಾಡಲು ಠರಾವು ಪಾಸು ಮಾಡಿರುವುದನ್ನು ದೂರುದಾರರು ಕಾರ್ಯನಿರ್ವಾಹಕ ಅಧಿಕಾರಿಗಳ ಗಮನಕ್ಕೆ ತಂದಿರುತ್ತಾರೆ. ಸದರಿ ಅಧಿಕಾರಿಗಳು ಈ ವಿಷಯದ ಬಗ್ಗೆ ಪರಿಶೀಲನೆ ಮಾಡಿ, ವರದಿ ಸಲ್ಲಿಸಿರುತ್ತಾರೆ. ವರದಿಯಲ್ಲಿ ತಕರಾರು ಅರ್ಜಿಯಲ್ಲಿ ತಿಳಿಸಿದ ಪ್ರಕಾರ ಕಾನೂನಿನ ರೀತಿಯಲ್ಲಿ ವಾಟ್ನಿ ಪಾಲು ಪಡೆದುಕೊಳ್ಳಲು ನ್ಯಾಯಾಲಯದ ಮೊರೆ ಹೋಗಬೇಕಾಗಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿರುತ್ತಾರೆ. ಈ ವಿಷಯವನ್ನು ಮಾನ್ಯ ವಿಚಾರಣಾಧಿಕಾರಿಗಳು ಗಮನಿಸಿರುತ್ತಾರೆ.
- ಕಾರಣ ನಾನು ಆಪಾದಿತ ಸರ್ಕಾರಿ ನೌಕರನಾಗಿ ನನ್ನ ಕರ್ತವ್ಯ ಪಾಲನೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆಯನ್ನು ತೋರಿಸಿ ಸ್ವಂತ ಲಾಭಕ್ಕಾಗಿ ಸಾರ್ವಜನಿಕ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದಿಲ್ಲ. ಆದ್ದರಿಂದ ಮಾನ್ಯರವರು ಮೇಲ್ಕಾಣಿಸಿದ ಆಪಾದನೆಯಿಂದ ಮತ್ತು ನಾಲ್ಕು ಸಂಚಿತ ವಾರ್ಷಿಕ ವೇತನ ಬಡ್ತಿಯನ್ನು ತಡೆಹಿಡಿಯಲು ಮಾಡಿರುವ ಶಿಫಾರಸ್ಸಿನ ದಂಡನೆಯಿಂದ ಮುಕ್ತಗೊಳಿಸಲು ವಿನಂತಿಸಿರುತ್ತಾರೆ.

ಸದರಿ ಪ್ರಕರಣದ ಕುರಿತು ಅಪರ ನಿಬಂಧಕರು, ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ ರವರು ವಿಚಾರಣೆ ನಡೆಸಿ ಸಲ್ಲಿಸಿರುವ ವಿಚಾರಣಾ ವರದಿಯಲ್ಲಿ ಆಪಾದಿತ ನೌಕರರ ವಿರುದ್ಧದ ಆರೋಪಗಳು ಸಾಬೀತಾಗಿರುವುದಕ್ಕೆ ವಿವರವಾದ ಕಾರಣಗಳನ್ನು ನೀಡಿರುತ್ತಾರೆ. ಸದರಿ ವಿಚಾರಣಾ ವರದಿಯ ಪ್ರಮುಖ ಅಂಶಗಳನ್ನು ಈ ಕೆಳಕಂಡಂತೆ ಪುನರುಚ್ಛರಿಸಿದೆ:-

> "31. The DGO himself has deposed that the complainant's father Sri.Doddabasappa Gowda is the original khathedar of Sy.No.191. He admits that there was an objection when the khatha was changed to the name of Basavanagowda. The DGO admits that the partition deed is not registered. The DGO has not placed any materials on record to show that he enlightened the general body meeting that on the basis of unregistered document, khata cannot be changed. This fact also was not brought to the notice of Executive Officer. Only on the basis of the resolution, khata was changed. The DGO, being the PDO has an important role to play in general body meeting. But without doing his duty diligently now has taken the contention that he has followed the resolution passed by the general body meeting, which cannot be accepted.
>
> 32. The oral and the documentary evidence on record show that DGO while working as PDO in Alur Gram Panchayath, khatha of the property bearing No.191 was changed in the name of complainant's brother Sri.Basavanagowda Doddabasappa Gowda Hiregowdra. Though the complainant raised objections, the same was not considered by the DGO. The resolution was also passed to change the Khata. Inspite of the objections, the resolution was passed to change the Khata as per relinquishment deed. The DGO being the PDO has not brought these facts to the notice of the Executive Officer of Taluk Panchayath.

.....3

Thereby the DGO, being the Government/Public Servant has failed to maintain absolute integrity besides devotion to duty and acted in a manner unbecoming of a Government servant. Hence, I proceed to answer Point No.1 in the Affirmative."

ಸರ್ಕಾರವು ಪರಿಶೀಲಿಸಿ, ಈ ಹಿನ್ನೆಲೆಯಲ್ಲಿ, ಆಪಾದಿತರು ಎರಡನೇ ಕಾರಣ ಕೇಳುವ ನೋಟೀಸಿಗೆ ನೀಡಿರುವ ಉತ್ತರವನ್ನು ಅಂಗೀಕರಿಸಲು ಬರುವುದಿಲ್ಲ ಮತ್ತು ವಿಚಾರಣಾ ವರದಿ ಹಾಗೂ ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸನ್ನು ಒಪ್ಪುವುದು ಸಮಂಜಸವೆಂದು ಕಂಡು ಬರುತ್ತದೆ. ಆದುದರಿಂದ ವಿಚಾರಣಾ ವರದಿ ಹಾಗೂ ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸನ್ನು ಅಂಗೀಕರಿಸಿ, ಶ್ರೀ ಅಯ್ಯಪ್ಪ ಎಸ್.ಮಲಗಲದಿನ್ನಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಆಲೂರ ಗ್ರಾಮ ಪಂಚಾಯಿತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 8(iii) ಅಡಿಯಲ್ಲಿ ನಿರ್ದಿಷ್ಟಪಡಿಸಿದಂತೆ ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆಹಿಡಿಯುವ ದಂಡನೆಯನ್ನು ವಿಧಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 659 ಗ್ರಾಪಂಕಾ 2016, ಬೆಂಗಳೂರು, ದಿನಾಂಕ: 06.07.2018**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಆರೋಪಗಳು ಸಾಬೀತಾಗಿರುವ ಹಿನ್ನೆಲೆಯಲ್ಲಿ ಮಾನ್ಯ ಉಪಲೋಕಾಯುಕ್ತರ ವರದಿಯಲ್ಲಿನ ಶಿಫಾರಸ್ಸಿನನ್ವಯ, ಶ್ರೀ ಅಯ್ಯಪ್ಪ ಎಸ್.ಮಲಗಲದಿನ್ನಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಆಲೂರ ಗ್ರಾಮ ಪಂಚಾಯಿತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 8(iii) ಅಡಿಯಲ್ಲಿ ನಿರ್ದಿಷ್ಟಪಡಿಸಿದಂತೆ ನಾಲ್ಕು ವಾರ್ಷಿಕ ವೇತನ ಬಡ್ತಿಗಳನ್ನು ಸಂಚಿತ ಪರಿಣಾಮ ಸಹಿತವಾಗಿ ತಡೆಹಿಡಿಯುವ (Withholding four annual increments with cumulative effect) ದಂಡನೆಯನ್ನು ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,
6/7

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಅಪರ ನಿಬಂಧಕರು, ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ವಿಜಯಪುರ ಜಿಲ್ಲಾ ಪಂಚಾಯತಿ, ವಿಜಯಪುರ.
6) ಕಾರ್ಯನಿರ್ವಾಹಕ ಅಧಿಕಾರಿ, ಮುದ್ದೇಬಿಹಾಳ ತಾಲ್ಲೂಕು ಪಂಚಾಯತಿ, ಮುದ್ದೇಬಿಹಾಳ, ವಿಜಯಪುರ ಜಿಲ್ಲೆ. (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವಂತೆ ಕೋರಿದೆ.)
7) ಶ್ರೀ ಅಯ್ಯಪ್ಪ ಎಸ್.ಮಲಗಲದಿನ್ನಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಹಿರೇಮುರಾಳ ಗ್ರಾಮ ಪಂಚಾಯಿತಿ, ಮುದ್ದೇಬಿಹಾಳ ತಾಲ್ಲೂಕು, ವಿಜಯಪುರ ಜಿಲ್ಲೆ.
8) ಗಣಕಕೋಶ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ. – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.